# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 409 (584)
ಉತ್ತರಿಸಬೇಕಾದ ದಿನಾಂಕ : 14.08.2025
ಸದಸ್ಯರ ಹೆಸರು : ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಯವರು

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಕ್ರೀಡಾ ಕ್ಷೇತ್ರದಲ್ಲಿ ಸಾಧನೆ ಮಾಡಿದ ಅಭ್ಯರ್ಥಿಗಳಿಗೆ ಸರ್ಕಾರವು 2% ಹುದ್ದೆ ನೇಮಕಾತಿಗೆ ಮೀಸಲಾತಿ ನೀಡುವುದಾಗಿ ಘೋಷಿಸಿದ್ದು, ನಿಜವೇ; | ಹೌದು. |
| (ಆ) | ಈ ಮೀಸಲಾತಿ ಪೂರ್ಣವಾಗಿ ಜಾರಿಗೆ ತರಲು ವಿಳಂಬವಾಗುತ್ತಿರಲು ಕಾರಣಗಳೇನು; | ಕರ್ನಾಟಕ ರಾಜ್ಯದ ಸಿವಿಲ್ ಸೇವೆಗಳಲ್ಲಿನ ಗ್ರೂಪ್-ಎ, ಗ್ರೂಪ್-ಬಿ, ಗ್ರೂಪ್-ಸಿ ಮತ್ತು ಗ್ರೂಪ್-ಡಿ ವೃಂದದ ಹುದ್ದೆಗಳಿಗೆ ಮಾಡುವ ನೇರ ನೇಮಕಾತಿಯಲ್ಲಿ ಕ್ರೀಡಾ ಸಾಧಕ ಅಭ್ಯರ್ಥಿಗಳಿಗೆ ಶೇಕಡ 2 ರಷ್ಟು ಹುದ್ದೆಗಳನ್ನು ಮೀಸಲಿಡುವ ಕುರಿತು ಸರ್ಕಾರದ ಅಧಿಸೂಚನೆ ಸಂಖ್ಯೆ:ಸಿಆಸುಇ 295 ಸೇನೆನಿ 2023, ದಿನಾಂಕ 18-09-2024 ರನ್ವಯ ನಿಯಮಗಳನ್ನು ರಚಿಸಿ ಆದೇಶಿಸಲಾಗಿತ್ತು. ಅಧಿಸೂಚನೆಯನ್ನು ಯಥಾವತ್ ಅಳವಡಿಸಿಕೊಂಡಲ್ಲಿ ನೇಮಕಾತಿ ಸಂದರ್ಭದಲ್ಲಿ ಗೊಂದಲಗಳುಂಟಾಗುವ ಸಾಧ್ಯತೆ ಇರುವುದರಿಂದ ಹಾಗೂ ಕ್ರೀಡಾ ಸಾಧಕರ ಹಿತದೃಷ್ಟಿಯಿಂದ ಸದರಿ ನಿಯಮಗಳನ್ನು ಪರಿಷ್ಕರಿಸುವುದು ಅಗತ್ಯವಾಗಿರುವುದರಿಂದ ದಿನಾಂಕ 18-09-2024 ರ ಅಧಿಸೂಚನೆಯನ್ನು ತಡೆಹಿಡಿಯಲಾಗಿದೆ. ಕ್ರೀಡಾ ಸಾಧಕರಿಗೆ ಶೇಕಡ 2 ರಷ್ಟು ಮೀಸಲಾತಿ ನಿಯಮಗಳನ್ನು ಪರಿಷ್ಕರಿಸಿ ಮರುರೂಪಿಸಲು ಅಗತ್ಯ ಶಿಫಾರಸ್ಸು ಮಾಡಲು ಸರ್ಕಾರದ ಆದೇಶ ಸಂಖ್ಯೆ:ವೈಎಸ್‌ಡಿ-ಇವೈಡಬ್ಲ್ಯೂ/229/2024, ದಿನಾಂಕ:02-12-2024 ರನ್ವಯ ರಚಿಸಲಾದ ಕ್ರೀಡಾ ಪರಿಣಿತರು ಹಾಗೂ ಅಧಿಕಾರಿಗಳನ್ನು ಒಳಗೊಂಡ ಸಮಿತಿಯು ಮಾಡಿರುವ ಶಿಫಾರಸ್ಸುಗಳನ್ವಯ ಪರಿಷ್ಕೃತ ನಿಯಮಗಳನ್ನು ರಚಿಸುವ ಪ್ರಸ್ತಾವನೆಯು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಪರಿಶೀಲನೆಯಲ್ಲಿರುತ್ತದೆ. |
| (ಇ) | ಮುಂದಿನ ನೇಮಕಾತಿಗಳಲ್ಲಿ ಈ ಮೀಸಲಾತಿ ಪ್ರಕ್ರಿಯೆಯನ್ನು ಸಮರ್ಪಕವಾಗಿ ಜಾರಿಗೆ ತರಲು ಸರ್ಕಾರದ ಯೋಜನೆಗಳಾವುವು? (ಮಾಹಿತಿ ನೀಡುವುದು) | ಸರ್ಕಾರವು ನೇಮಕಾತಿ ನಿಯಮಗಳನ್ನು ಅಂತಿಮಗೊಳಿಸಿ, ಅಧಿಸೂಚಿಸಿದ ನಂತರ ನಿಯಮಾನುಸಾರ ನೇರ ನೇಮಕಾತಿಯಲ್ಲಿ ಸಾಧಕ ಕ್ರೀಡಾಪಟುಗಳಿಗೆ ಶೇಕಡ 2ರಷ್ಟು ಮೀಸಲಾತಿಯನ್ನು ಅನುಷ್ಠಾನಗೊಳಿಸುವ ಬಗ್ಗೆ ಕ್ರಮ ವಹಿಸಲಾಗುವುದು. |

**ವೈಎಸ್‌ಡಿ-ಇವೈಡಬ್ಲ್ಯೂ/143/2025**

(ಸಿದ್ದರಾಮಯ್ಯ)
ಮುಖ್ಯಮಂತ್ರಿ.